ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ:-ಸಿ1(1) ಅಧೀ.ಸು 01 :/2019-20 ದಿನಾಂಕ:10-10-2019

**ಸುತ್ತೋಲೆ**

**ವಿಷಯ:** ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧಿಕಾರಿಗಳು ತಮ್ಮ ಅಧೀನ ಸಿಬ್ಬಂದಿ ಹಾಗೂ ಶಿಕ್ಷಕರುಗಳಿಗೆ ಕಿರುಕುಳ ನೀಡುತ್ತಿರುವ ಬಗ್ಗೆ

**ಉಲ್ಲೇಖ** :ಮಾನ್ಯ ಶಿಕ್ಷಣ ಸಚಿವರು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರವರ ಟಿಪ್ಪಣಿ ಸಂಖ್ಯೆ ಪ್ರಾಪ್ರೌ.ಸ.ಸ/58/2019-20 ದಿನಾಂಕ 3/9/2019

-*-*-*-*-*-

ಸಾರ್ವಜನಿಕ ಶಿಕ್ಷಣ ಇಲಾಖೆಯು ಅತ್ಯಂತ ಮಹತ್ವದ ಹಾಗೂ ವಿಸ್ತಾರವಾದ ಇಲಾಖೆಯಾಗಿದ್ದು ಕಡ್ಡಾಯ ಪ್ರಾಥಮಿಕ ಶಿಕ್ಷಣ ಒದಗಿಸಲು ಬದ್ಧವಾಗಿದೆ. ಇಲಾಖೆಯ ಶೈಕ್ಷಣಿಕ ಕಾರ್ಯಕ್ರಮಗಳಲ್ಲಿ ಅಧಿಕಾರಿಗಳು, ಬೋಧಕರು/ಬೋಧಕೇತರ ಸಿಬ್ಬಂದಿಗಳನ್ನು ತೊಡಗಿಸಿಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆ.

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆನ್ನೆಲುಬಾದ ಕೆಳ ಹಂತದ ಅಧೀನ ಸಿಬ್ಬಂದಿ ಮತ್ತು ಸಮಾಜ ನಿರ್ಮಾಣದ ಪ್ರಮುಖ ಕಾರ್ಯದಲ್ಲಿ ತೊಡಗಿಸಿಕೊಂಡ ಶಿಕ್ಷಕ ಸಮುದಾಯವನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಕೆಲವು ಅಧಿಕಾರಿಗಳು ಕಿರುಕುಳ ನೀಡುವುದು, ದಬ್ಬಾಳಿಕೆ ಮಾಡುವುದು, ಹೆದರಿಸುವುದು ದರ್ಪದ ಮನೋಭಾವ ಪ್ರದರ್ಶಿಸುತ್ತಾರೆಂಬ ಆರೋಪಗಳು ಪ್ರವಾಸದ ಸಮಯದಲ್ಲಿ ದೂರುಗಳನ್ನು ಗಮನಿಸಿ ಇದರಿಂದಾಗಿ ಅಧೀನ ಸಿಬ್ಬಂದಿ ಹಾಗೂ ಶಿಕ್ಷಕರ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿ ಅದು ನಮ್ಮ ಮುಂದಿನ ಪ್ರಜೆಗಳಾದ ವಿದ್ಯಾರ್ಥಿ ಸಮುದಾಯದ ಮೇಲೆ ಪರೋಕ್ಷ ಪರಿಣಾಮ ಬೀರುವ ಸಾಧ್ಯತೆಗಳು ಇರುವುದರಿಂದ ಇಂತಹ ಕಹಿ ಘಟನೆಗಳು ಸಂಭವಿಸದಂತೆ ಅಗತ್ಯ ಕ್ರಮ ವಹಿಸಲು ಉಲ್ಲೇಖಿತ ಪತ್ರದಲ್ಲಿ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಸೂಚಿಸಿರುತ್ತಾರೆ.

ಮಾನ್ಯ ಸಚಿವರ ಸೂಚನೆಯನ್ನು ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಇಲಾಖೆಯ ಮೇಲಾಧಿಕಾರಿಗಳು ಗಂಭೀರವಾಗಿ ಪರಿಗಣಿಸಲು ಹಾಗೂ ತಮ್ಮ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರು/ಬೋಧಕೇತರ ಸಿಬ್ಬಂದಿಗಳೊಂದಿಗೆ ಸಹಕಾರ ಮತ್ತು ಗೌರವಯುತವಾಗಿ ವರ್ತಿಸಿ ಎಲ್ಲರೂ ಶೈಕ್ಷಣಿಕ ಕಾರ್ಯದ ಯಶಸ್ವಿಗೆ ಸಹಕರಿಸಲು ಕೋರಿದೆ. ಇದಕ್ಕೆ ಸಂಬಂಧಿಸಿದಂತೆ ಇನ್ನು ಮುಂದೆ ಆರೋಪಗಳು/ದೂರುಗಳು ಮರುಕಳುಹಿಸಿದರೆ ಅಂತಹ ಅಧಿಕಾರಿಗಳ ವಿರುದ್ಧ ಕರ್ನಾಟಕ ಸಿವಿಲ್ ಸೇವೆಗಳು (ನಡತೆ) ನಿಯಮಗಳು ಹಾಗೂ ಕೆ.ಸಿ.ಎಸ್ (ಸಿ.ಸಿ.ಎ) ನಿಯಮಡಿ ಶಿಸ್ತುಕ್ರಮಕ್ಕೆ ಒಳಪಡಿಸಲಾಗುವುದು ಎಂದು ತಿಳಿಸಲಾಗಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

[ಅರುಳ್ ಕುಮಾರ್]
ಜಂಟಿ ನಿರ್ದೇಶಕರು (ಆಡಳಿತ)

**ಇವರಿಗೆ:**

ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ